# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಶ್ರೀರಂಗಪಟ್ಟಣ

## ಸಿ.ಸಿ.**662**/2014

| | |
|---|---|
| ಸಿ.ಡಬ್ಲ್ಯೂ : | 10 |
| ಪಿ.ಡಬ್ಲ್ಯೂ : | 6 |

| | | |
|---|---|---|
| ಸಾಕ್ಷಿದಾರರ ಹೆಸರು | : | ಶ್ರೀ ವನರಾಜು ವಿ. |
| ತಂದೆ/ ಪತಿಯ ಹೆಸರು | : | ಚನ್ನವೀರೇಗೌಡ |
| ವಯಸ್ಸು | : | 50 ವರ್ಷ |
| ವೃತ್ತಿ | : | ಪಿ..ಐ , ನಗರ ಪೊಲೀಸ್ ಠಾಣೆ , ಸಕಲೇಶಪುರ |
| ವಾಸ | : | ಸಕಲೇಶಪುರ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 10.11.2025**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನಾನು ದಿನಾಂಕ 29.03.2014 ರಿಂದ 15.08.2015 ರವರೆಗೆ ಅರಕೆರೆ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿ:18.09.2014 ರಂದು ಈ ಪ್ರಕರಣದ ಕಡತವನ್ನು ಚಾಸಾ.9 ರವರಿಂದ ಕಡೆಯಿಂದ ಪಡೆದುಕೊಂಡು ಪರಿಶೀಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿರುತ್ತೇನೆ.

ಅದೇ ದಿನ ಚಾಸಾ.1 ರವರ ಮುಂದುವರೆದ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಈಗ ಚಾಸಾ.1 ರವರ ಮುಂದುವರೆದ ಹೇಳಿಕೆಯನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-7 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು.

ನಂತರ ದಿನಾಂಕ 27.10.2014 ರಂದು ಚಾಸಾ.1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಗೆ ಈಗ ಚಾಸಾ.1 ರವರ

ಗಾಯದ ಪ್ರಮಾಣ ಪತ್ರವನ್ನು ತೋರಿಸಿದ್ದು, ಸಾಕ್ಷಿಯು ಅದನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-8 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ನಂತರ ತನಿಖೆಯು ಮುಕ್ತಾಯವಾಗಿದ್ದು ಆರೋಪಿತರ ವಿರುದ್ದ ಆರೋಪ ಸಾಬೀತಾದ ಕಾರಣ ಮಾನ್ಯ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಿರುತ್ತೇನೆ.

ಪಾಟೀ ಸವಾಲು: ಆರೋಪಿತರ ಪರ ವಕೀಲರಿಂದ

ಚಾಸಾ.1 ರವರು ನನ್ನ ಸಮಕ್ಷಮ ಯಾವುದೇ ಹೇಳಿಕೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ಅಪರಾಧ ಮಾಡದೆ ಇದ್ದರೂ ಸಹಾ, ಅವರ ವಿರುದ್ದ ಸುಳ್ಳು ದೋಷಾರೋಪಣ ಪತ್ರವನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.